08–07–2015 ರಂದು ಸಭೆಯನ್ನು ಜರುಗಿಸಿ ಪ್ರಾಂಶುಪಾಲರುಗಳಿಗೆ ಕ್ಯಾಲೆಂಡರ್ ಆಫ್ ಇವೆಂಟ್ಸನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚನೆಗಳನ್ನು ನೀಡಲಾಗಿದೆ. ಇನ್ನು ಮುಂದೆ ಫಲಿತಾಂಶವು ವಿಳಂಬವಾಗದಂತೆ ಎಲ್ಲ ಕ್ರಮಗಳನ್ನು ವಹಿಸಲಾಗಿದೆ.

ಶ್ರೀ ವಿನಯ್ ಕುಮಾರ್ ಸೊರಕೆ (ಮಾನ್ಯ ನಗರಾಭಿವೃದ್ಧಿ ಸಚಿವರು) (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಪರವಾಗಿ): ಮಾನ್ಯ ಉಪಾಧ್ಯಕ್ಷರೆ, ಈ ಫಲಿತಾಂಶ ವಿಳಂಬವಾಗಿರುವುದರ ಬಗ್ಗೆ, ಶಿಕ್ಷಕರ ಹಾಗೂ ಮೌಲ್ಯಮಾಪಕರ ಕೊರತೆಯನ್ನು ನೀಗಿಸುವ ಸಲುವಾಗಿ ಅವರ ನೇಮಕಾತಿ ಮಾಡಲು ಸರ್ಕಾರ ಈಗಾಗಲೇ ಆದೇಶ ಮಾಡಿದೆ. ವಿಶ್ವವಿದ್ಯಾನಿಲಯಗಳಲ್ಲಿ ಕೂಡಾ ನೇಮಕಾತಿ ಪ್ರಕ್ರಿಯೆ ಆರಂಭಿಸುವ ತಿಳುವಳಿಕೆ ಕೊಟ್ಟಿದ್ದಾರೆ. ನಂತರ ವಿಶ್ವವಿದ್ಯಾನಿಲಯ ಮಟ್ಟದ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರನ್ನು ಕರೆದು ಸಭೆ ನಡೆಸುವ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ. ಅದೇ ರೀತಿಯಾಗಿ calendar of events ಅನ್ನು ಕೂಡ ಕಟ್ಟುನಿಟ್ಟಾಗಿ ಪಾಲಿಸುವ ಬಗ್ಗೆ ಸೂಚನೆ ನೀಡಿದ್ದೇವೆ. ಮುಂದಕ್ಕೆ ಅಂತಹ ವಾತಾವರಣ ಸೃಷ್ಟಿಯಾಗದಂತೆ ಎಲ್ಲಾ ರೀತಿಯ ಕ್ರಮವನ್ನು ಕೈಗೊಳ್ಳುತ್ತೇವೆ.

14. ವಿಷಯ: ಬೆಳಗಾವಿ ಜಿಲ್ಲೆಯ ಕಾಗವಾಡ ಕ್ಷೇತ್ರ ಶಿಕ್ಷಣಾಧಿಕಾರಿಯವರು ಅಧಿಕಾರ ಹಾಗೂ ಹಣ ದುರುಪಯೋಗ ಮಾಡಿರುವುದು ಸಾಬೀತಾಗಿರುವುದರಿಂದ ನಿಯಮಗಳನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

* * * * *

ಶ್ರೀ ಸಿ.ಟಿ. ರವಿ (ಚಿಕ್ಕಮಗಳೂರು) (ಉಮೇಶ್ ವಿ. ಕತ್ತಿ ರವರ ಪರವಾಗಿ): ಮಾನ್ಯ ಉಪಾಧ್ಯಕ್ಷರೆ, ಬೆಳಗಾವಿ ಜಿಲ್ಲೆಯ ಕಾಗವಾಡ ಕ್ಷೇತ್ರ ಶಿಕ್ಷಣಾಧಿಕಾರಿಯವರಾದ ಶ್ರೀ ಮೋಹನ್ ಪಿ. ಜಿರಗಿಹಾಳ್ ಇವರು ಹಲವಾರು ಪ್ರಕರಣಗಳಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡು ಸರ್ಕಾರಿ ಹಣವನ್ನು ದುರುಪಯೋಗಮಾಡಿಕೊಂಡಿರುವ ಬಗ್ಗ ಈಗಾಗಲೇ ವರದಿಯಾಗಿದೆ. ಇದಕ್ಕೆ

ಸಂಬಂಧಿಸಿದಂತೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು): ಶ್ರೀ ಮೋಹನ ಪಿ. ಜಿರಗಿಹಾಳ, ಕ್ಷೇತ್ರ ಶಿಕ್ಷಣಾಧಿಕಾರಿ, ಕಾಗವಾಡ, ಬೆಳಗಾವಿ ಇವರ ವಿರುದ್ಧದ ದೂರುಗಳ ಕುರಿತು ಸರ್ಕಾರದ ಅಪರ ಕಾರ್ಯದರ್ಶಿ(ಆಡಳಿತ), ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರಿಂದ ಖುದ್ದು ಸ್ಥಳ ತನಿಖೆ ನಡೆಸಲಾಗಿ, ಸದರಿ ಪ್ರಾಥಮಿಕ ತನಿಖಾ ವರದಿಯಲ್ಲಿ ಅತಿಥಿ ಶಿಕ್ಷಕರ ವೇತನ ಬಟವಾಡೆಗೆ ಸಂಬಂಧಿಸಿದಂತೆ ಅವ್ಯವಹಾರ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಈ ಸಂಬಂಧ ಈಗಾಗಲೇ ಶಿಸ್ತು ಕ್ರಮ ಜರುಗಿಸಲು ಅನುವಾಗುವಂತೆ ದೋಷಾರೋಪಣಾ ಪಟ್ಟಿಯನ್ನು ಅನುಬಂಧಗಳೊಂದಿಗೆ ಸಲ್ಲಿಸುವಂತೆ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಇವರನ್ನು ಕೋರಲಾಗಿರುತ್ತದೆ. ಪ್ರಸ್ತುತ ಪ್ರಾಥಮಿಕ ತನಿಖಾ ವರದಿಯನ್ನಾಧರಿಸಿ ಕರ್ನಾಟಕ ನಾಗರೀಕ ಸೇವಾ(ಸಿಸಿಎ) ನಿಯಮಾವಳಿಗಳು 1957ರ ನಿಯಮ 10(3) ರನ್ವಯ ಅಮಾನತ್ತುಗೊಳಿಸಿ ಆದೇಶಿಸಿದೆ.

ಶ್ರೀ ಕಿಮ್ಮನೆ ರತ್ನಾಕರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, ಈಗಾಗಲೇ ಉತ್ತರವನ್ನು ಕೊಟ್ಟಿದ್ದೇವೆ. ಸಿ.ಸಿ.ಎ ರೂಲ್ಸ್ ಪ್ರಕಾರ ಅವರ ಮೇಲೆ ಕ್ರಮ ತೆಗೆದುಕೊಂಡು ಅಮಾನತ್ತುಪಡಿಸಲು ಆದೇಶ ಮಾಡಲಾಗಿದೆ.

ಶ್ರೀ ಸಿ.ಟಿ. ರವಿ: ನೀವು ಅಮಾನತ್ತುಗೊಳಿಸಿದ್ದೀರಿ. ಅಮಾನತ್ತಿಗೆ ವಿಳಂಬವೇಕೆ ಎನ್ನುವುದು ಅಷ್ಟೇ. ನಿಮ್ಮಂತಹ ಸಚಿವರಿದ್ದಾಗಲೂ ಕೂಡಾ ಮೂರು–ಮೂರು ತಿಂಗಳು ವಿಳಂಬ ಏಕಾಯಿತು? ಎರಡೆರಡು ಬಾರಿ ಗಮನ ಸೆಳೆದ ನಂತರ ನೀವು ಅಮಾನತ್ತುಗೊಳಿಸಿದ್ದೀರಿ ಎನ್ನುವುದು ದುಃಖದಾಯಕ ವಿಷಯ. ಈಗ ಅಮಾನತ್ತುಗೊಳಿಸಿದ್ದೀರಿ ಧನ್ಯವಾದ.

ಉಪಾಧ್ಯಕ್ಷರು: ಆಯಿತು ಬಿಡಿ. ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ರವರು ಹಾಜರಿಲ್ಲ.

15. ವಿಷಯ: ಗದಗ–ವಾಡಿ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಭೂಮಿ ಸ್ವಾಧೀನ ಪ್ರಕ್ರಿಯೆಯನ್ನು ಪ್ರಾರಂಭಿಸದಿರುವ ಬಗ್ಗೆ.

* * * * *

ಶ್ರೀ ಬಿ.ಆರ್. ಯಾವಗಲ್ (ನರಗುಂದ): ಮಾನ್ಯ ಅಧ್ಯಕ್ಷರೆ, ಗದಗ–ವಾಡಿ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಭೂ ಸ್ವಾಧೀನ ಪ್ರಕ್ರಿಯೆಯನ್ನು ಪ್ರಾರಂಭಿಸದಿರುವ ಬಗ್ಗೆ ಮಾನ್ಯ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುತ್ತೇನೆ.

ಶ್ರೀ ಆರ್. ರೋಷನ್ ಬೇಗ್ (ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ, ವಕ್ಫ್ ಸಚಿವರು): ಗದಗ–ವಾಡಿ ರೈಲ್ವೆ ಮಾರ್ಗ ಯೋಜನೆಯನ್ನು 2013–14ರಲ್ಲಿ ರಾಜ್ಯ ಸರ್ಕಾರ ಮತ್ತು ರೈಲ್ವೆ ಮಂತ್ರಾಲಯವು ಜಂಟಿಯಾಗಿ ಶೇ.50:50 ವೆಚ್ಚ ಹಂಚಿಕೆಯಡಿ ರೂ. 1922.14 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗುತ್ತಿದ್ದು, ಈ ಮಾರ್ಗದ ಒಟ್ಟು ಉದ್ದ 252 ಕಿ.ಮೀ.ಗಳಾಗಿರುತ್ತದೆ. ಈ ಮಾರ್ಗಕ್ಕೆ ಅಗತ್ಯವಿರುವ ಸುಮಾರು 2500 ಎಕರೆ ಭೂಮಿಯನ್ನು ರಾಜ್ಯ ಸರ್ಕಾರವು ಉಚಿತವಾಗಿ ನೀಡಲು ಅನುಮೋದನೆ ನೀಡಿದ್ದು, ಇದರಲ್ಲಿ ಸುಮಾರು 500 ಎಕರೆ ಸರ್ಕಾರಿ ಭೂಮಿಯಾಗಿದ್ದು, ಉಳಿದ 2000 ಎಕರೆ ಖಾಸಗಿ ಭೂಮಿಯಾಗಿರುತ್ತದೆ. ಈ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಕೇಂದ್ರ ಸರ್ಕಾರದ ಭೂಸ್ವಾಧೀನ ಕಾಯ್ದೆ (ಪುನನಿರ್ಮಾಣ ಮತ್ತು ಪುನರ್ವಸತಿ) 2013 ದಿನಾಂಕ: 01.01.2014 ರಂದು ಜಾರಿಗೆ ಬಂದಿದ್ದು, ಇದರನ್ವಯ ರಾಜ್ಯ ಸರ್ಕಾರದಿಂದ ನಿಯಮಗಳು ಅಂತಿಮಗೊಳ್ಳುವುದನ್ನು ನಿರೀಕ್ಷಿಸುತ್ತಿರುವ ಹಿನ್ನೆಲೆಯಲ್ಲಿ ಭೂಸ್ವಾಧೀನ ಪ್ರಕ್ರಿಯೆ ಕುಂಠಿತವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಈ ಮಾರ್ಗದ ಅಗತ್ಯತೆಯನ್ನು ಗಮನಿಸಿ ಭೂಮಿಯನ್ನು ಭೂಸ್ವಾಧೀನಪಡಿಸಿಕೊಳ್ಳುವ ಬಗ್ಗೆ ಚರ್ಚಿಸಲು ಮಾನ್ಯ